# ಕರ್ನಾಟಕ ಸರ್ಕಾರ

ನಂ.ಗ್ರಾಅಪ/04/ಗ್ರಾಪಂಕಾ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:30-03-2016

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸಲು ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಗಳನ್ನು ಅನಿಯಮತವಾಗಿ ಏರ್ಪಡಿಸುತ್ತಿರುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 306 ಜಿಪಸ 2011, ದಿನಾಂಕ:19-10-2011.
2. ಸರ್ಕಾರದ ಇದೇ ಸಮಸಂಖ್ಯೆಯ ಸುತ್ತೋಲೆ ದಿನಾಂಕ:25-02-2016

---

ಸರ್ಕಾರದ ಅಧಿಕಾರ ವಿಕೇಂದ್ರಿಕರಣ ನೀತಿಯಿಂದಾಗಿ ಪಂಚಾಯತ್ ರಾಜ್ ಸಂಸ್ಥೆಗಳ ಮೇಲೆ ಅಭಿವೃದ್ಧಿ ಕಾರ್ಯಗಳ ಅನುಷ್ಠಾನ ಜವಾಬ್ದಾರಿ ಹೆಚ್ಚಾಗಿರುತ್ತದೆ. ಗ್ರಾಮ ಪಂಚಾಯತಿಗಳ ಪ್ರಕಾರ್ಯಗಳು ಹಾಗೂ ಜವಾಬ್ದಾರಿಗಳು ಗಣನೀಯ ಪ್ರಮಾಣದಲ್ಲಿ ಹೆಚ್ಚಿದ್ದು, ಪ್ರಮುಖ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅತಿ ಹೆಚ್ಚಿನ ಆಯವ್ಯಯ ಹಂಚಿಕೆಯೊಂದಿಗೆ ಗ್ರಾಮ ಪಂಚಾಯತಿಗಳಿಗೆ ವರ್ಗಾಯಿಸಲಾಗಿದೆ. ಈ ಕಾರ್ಯಕ್ರಮಗಳನ್ನು ಪ್ರಾಮಾಣಿಕವಾಗಿ / ಪಾರದರ್ಶಕವಾಗಿ ಮತ್ತು ಕಾಲಬದ್ಧವಾಗಿ ಅನುಷ್ಠಾನಗೊಳಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಸ್ಥಳೀಯವಾಗಿ ಕಾರ್ಯನಿರ್ವಹಿಸಿ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಉಸ್ತುವಾರಿ ಜವಾಬ್ದಾರಿಯನ್ನು ಹೊರಬೇಕಾಗಿರುತ್ತದೆ. ಸರ್ಕಾರದ ಕಾರ್ಯಕ್ರಮಗಳು / ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳಬೇಕಾದರೆ ಗ್ರಾಮ ಮಟ್ಟದ ಅಧಿಕಾರಿಯಾದ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಲ್ಲಿ ಇದ್ದು ಕಾರ್ಯನಿರ್ವಹಿಸಬೇಕಾಗಿರುತ್ತದೆ.

ರಾಜ್ಯದ ಗ್ರಾಮ ಪಂಚಾಯತಿಗಳು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಹಲವಾರು ವೈಯಕ್ತಿಕ, ಸಮುದಾಯ, ಸವಲತ್ತುಗಳನ್ನು ನೀಡುವಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವಂತೆ ಕರ್ತವ್ಯ ನಿರ್ವಹಿಸಬೇಕಾಗಿರುತ್ತದೆ.

ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪಕಾರ್ಯದರ್ಶಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಹಾಯಕ ನಿರ್ದೇಶಕರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹಲವಾರು ಅನಿಯಮಿತ ಸಭೆಗಳನ್ನು ಕರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿ ಕರ್ತವ್ಯ ನಿರ್ವಹಿಸಲು ಮತ್ತು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಗಳನ್ನು ಅನಿಯಮತವಾಗಿ ಏರ್ಪಡಿಸುತ್ತಿರುವುದನ್ನು ರದ್ದುಪಡಿಸಿ ಈ ಕೆಳಕಂಡಂತೆ ಕೂಡಲೇ ಕ್ರಮ ತೆಗೆದುಕೊಳ್ಳುವಂತೆ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದೆ.

1) ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ವಾರದಲ್ಲಿ ಕನಿಷ್ಠ 3 ದಿನ ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಲ್ಲಿ ಹಾಜರಿದ್ದು, ಕರ್ತವ್ಯ ನಿರ್ವಹಿಸಲು ಕ್ರಮ ವಹಿಸುವುದು.

2) ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ವಾರದಲ್ಲಿ ಕನಿಷ್ಠ 3 ದಿನದಲ್ಲಿ ಯಾವುದಾದರೂ ಒಂದು ದಿನ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕಡ್ಡಾಯವಾಗಿ ಏರ್ಪಡಿಸುವುದು. ತಿಂಗಳಿಗೊಮ್ಮೆ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸಭೆಯನ್ನು ಕರೆಯುವುದು.

3) ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾಸಿಕವಾಗಿ ಗ್ರಾಮ ಪಂಚಾಯತಿ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು / ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯನ್ನು ಕಂದಾಯ ಉಪವಿಭಾಗದನ್ವಯ ಕರೆದು ಪ್ರಗತಿ ಪರಿಶೀಲನೆ ಹಾಗೂ ಕಾರ್ಯಕ್ರಮ ಅನುಷ್ಠಾನದಲ್ಲಿ ಪ್ರಗತಿಪರ ಚಿಂತನೆ ನಡೆಸುವಂತೆ ಕೆಳಸ್ತರದ ಎಲ್ಲಾ ಅಧಿಕಾರಿಗಳಿಗೆ ಮನೋಸ್ಥೈರ್ಯ ತುಂಬಲು ಕ್ರಮ ವಹಿಸುವುದು.

4) ಅನಗತ್ಯವಾಗಿ ಮಾಡುತ್ತಿರುವ ವಿಡಿಯೋ ಕಾನ್ಫರೆನ್ಸ್‌ಗಳನ್ನು ರದ್ದುಪಡಿಸಿ, ನಿಯಮಿತವಾಗಿ ವಿಡಿಯೋ ಕಾನ್ಫರೆನ್ಸ್‌ಗಳನ್ನು ನಿಗದಿತ ಸಮಯದಲ್ಲಿ ಅಂದರೆ ಬೆಳಿಗ್ಗೆ 10.30 ರಿಂದ 5.00 ಗಂಟೆಯೊಳಗೆ ಮಾಡಲು ಕ್ರಮ ಕೈಗೊಳ್ಳತಕ್ಕದ್ದು.

...

(ಟಿ.ವಿ. ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,
2) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.

ಪ್ರತಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಯವರಿಗೆ.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಹೊರಡಿಸಿದೆ
4/4